ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು - 560001

ಸಂಖ್ಯೆ: ಸಿ3(7) ಪ್ರಾಶಾಶಿ. ಅಂ.ಘ. ಕೋ.ವರ್ಗಾವಣೆ/01/2021-22 ದಿನಾಂಕ: 05/01/2022

**: ಕೌನ್ಸಿಲಿಂಗ್ ಪರಿಷ್ಕೃತ ವೇಳಾಪಟ್ಟಿ :**

ವಿಷಯ: 2020-21ನೇ ಸಾಲಿನ ಅಂತರ್ ಘಟಕ ವಿಭಾಗ ಹೊರಗಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಕೋರಿಕೆ ವರ್ಗಾವಣೆಯ ಗಣಕೀಕೃತ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಕೋವಿಡ್ ವೀಕೆಂಡ್ ಕರ್ಫ್ಯೂ ಪ್ರಯುಕ್ತ ದಿನಾಂಕ: 08/01/2022 ರಂದು ನಡೆಯಬೇಕಾಗಿದ್ದ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ದಿನಾಂಕ: 10/01/2022 ಕ್ಕೆ ಮುಂದೂಡಿರುವ ಬಗ್ಗೆ:

ಉಲ್ಲೇಖ:1 ಮಾನ್ಯ ಆಯುಕ್ತರ ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಜ್ಞಾಪನ ಸಂಖ್ಯೆ: ಶಿ.ವ.ಕೋಶ.ಸಾ.ವ/01/2020-21 ದಿನಾಂಕ: 25/11/2021.

2. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ-2020 ರ ಸಂಖ್ಯೆ:: ಇಪಿ 08/ಇಟಿಆರ್ 2020 ದಿನಾಂಕ: 09/07/2020.
3. ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ: 17/12/2021.
4. ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020 ದಿನಾಂಕ: 04/01/2022

-----*****-----

ವಿಷಯದನ್ವಯ, 2020-21ನೇ ಸಾಲಿನ ಅಂತರ್ ಘಟಕ ವಿಭಾಗ ಹೊರಗಿನ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರನ್ನು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕರ ಕೋರಿಕೆ/ಪರಸ್ಪರ ಸಾಮಾನ್ಯ ವರ್ಗಾವಣೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಹಮ್ಮಿಕೊಳ್ಳಲು ಉಲ್ಲೇಖ-3 ರಲ್ಲಿ ಕೌನ್ಸಿಲಿಂಗ್ ವೇಳಾಪಟ್ಟಿಯನ್ನು ಪ್ರಕಟಿಸಿರುವುದು ಸರಿಯಷ್ಟೇ, ಪ್ರಸ್ತುತ ಉಲ್ಲೇಖ-4 ರನ್ವಯ ರಾಜ್ಯಾದ್ಯಂತ ಕೋವಿಡ್ ವೀಕೆಂಡ್ ಕರ್ಫ್ಯೂ ವಿಧಿಸಿರುವುದರಿಂದ ದಿನಾಂಕ: 08/01/2022 ರಂದು ನಡೆಯಬೇಕಾಗಿದ್ದ ಶಿಕ್ಷಕರ ವರ್ಗಾವಣಾ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮುಂದೂಡಿ **(ಆಧ್ಯತಾಪಟ್ಟಿಯ ಕ್ರಮ ಸಂಖ್ಯೆ: 2901 ರಿಂದ 3228 ರವರೆಗಿನ ಶಿಕ್ಷಕರಿಗೆ)** ದಿನಾಂಕ: 10/01/2022 ರಂದು **"ಶಿಕ್ಷಕರ ಸಧನ, ಕೆಂಪೇಗೌಡ ರಸ್ತೆ, ಕಾವೇರಿ ಭವನದ ಮುಂಭಾಗ, ಬೆಂಗಳೂರು-560001"** ಇಲ್ಲಿ ಬೆಳಿಗ್ಗೆ 10-00 ರಿಂದ ನಡೆಸಲಾಗುವುದು. ಉಳಿದಂತೆ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ಶಿಕ್ಷಕರು ಬದಲಾವಣೆಯನ್ನು ಗಮನಿಸಿ ಕೌನ್ಸಿಲಿಂಗ್‌ಗೆ ಹಾಜರಾಗಲು ತಿಳಿಸಿದೆ.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)
ಹಾಗೂ ಅಂತರ್ ಘಟಕ (ವಿಭಾಗದ ಹೊರಗೆ)
ವರ್ಗವಣಾ ಸಕ್ಷಮ ಪ್ರಾಧಿಕಾರಿಗಳು.
ಆಯುಕ್ತರ ಕಛೇರಿ, ಬೆಂಗಳೂರು.

ಇವರುಗಳಿಗೆ,

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲ್ಬುರ್ಗಿ.
3. ವಿಭಾಗೀಯ ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ವಿಭಾಗ ಇವರಿಗೆ ಅಗತ್ಯ ಕ್ರಮಕ್ಕಾಗಿ
4. ವಿಭಾಗೀಯ ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು, ಧಾರವಾಡ. ಬೆಳಗಾವಿ ವಿಭಾಗ ಇವರುಗಳಿಗೆ ಮಾಹಿತಿಗಾಗಿ
5. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಕಳುಹಿಸುತ್ತಾ ವೇಳಾಪಟ್ಟಿಯನ್ನು ತಮ್ಮ ಕಛೇರಿಯ ಪ್ರಕಟಣಾ ಫಲಕದಲ್ಲಿ ಪ್ರಕಟಿಸಲು ಹಾಗೂ ವೇಳಾಪಟ್ಟಿ ಮಾರ್ಪಾಡಾಗಿರುವ ವಿಚಾರವನ್ನು ಸಂಬಂಧಿಸಿದ ಶಿಕ್ಷಕರಿಗೆ ಮಾಹಿತಿಯನ್ನು ನೀಡಲು ಕ್ರಮವಹಿಸುವುದು.
6. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
7. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಘಟಕ, ಆಯುಕ್ತರ ಕಛೇರಿ ಬೆಂಗಳೂರು ಇವರಿಗೆ ಕಳುಹಿಸುತ್ತಾ ವೇಳಾಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.